# ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ನ್ಯಾಯಾಲಯ, ಚಿಕ್ಕಬಳ್ಳಾಪುರ
## SESSIONS CASE: 25/2023

**ಪ್ರಾ.ಸಾ. 03**
**ದೋ.ಸಾ. 12**

| | | |
|---|---|---|
| ಸಾಕ್ಷಿಯ ಹೆಸರು | : | ಮಂಜುನಾಥ್ |
| ಗಂಡನ ಹೆಸರು | : | ದೇವರಾಜ್ |
| ವಯಸ್ಸು | : | 43 ವರ್ಷ |
| ಉದ್ಯೋಗ | : | ಪಿ.ಐ ಲೋಕಾಯುಕ್ತ ಬೆಂಗಳೂರು |
| ವಾಸ | : | ಬೆಂಗಳೂರು |

**ದಿನಾಂಕ 22.06.2026 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯವಿಚಾರಣೆಃ ಸರ್ಕಾರಿ ಅಭಿಯೋಜಕರಿಂದ** ವಿಸಿ ಮುಖಾಂತರಃ

ನಾನು ದಿ.13.02.2015 ರಿಂದ 16.07.2016 ರವರೆಗೆ ಚಿಕ್ಕಬಳ್ಳಾಪುರ ಗ್ರಾಮಾಂತರ ಪಿ.ಎಸ್ ನಲ್ಲಿ ಪಿ.ಎಸ್.ಐ ಆಗಿ ಕರ್ತವ್ಯ ನಿರ್ವಹಿಸುತ್ತಿದ್ದೆನು.

2. ದಿ.04.03.2015 ರಂದು ಈ ಪ್ರಕರಣದ ಕಡತವನ್ನು ಪಿ.ಎಸ್.ಐ ಶ್ರೀನಿವಾಸಪ್ಪ ರವರಿಂದ ಪಡೆದುಕೊಂಡು, ತನಿಖೆಯನ್ನು ಪರಿಶೀಲಿಸಿರುತ್ತೇನೆ. ಈ ಪ್ರಕರಣದ ಆರೋಪಿಯನ್ನು ಪತ್ತೆ ಮಾಡುವ ಸಲುವಾಗಿ, ಚಾಸಾ-2 ಮತ್ತು 3 ರವರನ್ನು ನೇಮಿಸಿರುತ್ತೇನೆ. ದಿ.28.06.2015 ರಂದು ಈ ಪ್ರಕರಣಕ್ಕೆ ಸಂಬಂಧಪಟ್ಟಂತೆ FSL ವರದಿಯನ್ನು ಸ್ವೀಕರಿಸಿ ಕಡತಕ್ಕೆ ಅಳವಡಿಸಿಕೊಂಡಿರುತ್ತೇನೆ. ಸಾಕ್ಷಿಯು ಸದರಿ ವರದಿಯನ್ನು ನೋಡಿ ಗುರುತಿಸಿದ್ದು, ಅದನ್ನು **ನಿಪಿ-5** ಎಂದು ಸಾಕ್ಷಿಯು ಸಹಿಯನ್ನು **ನಿಪಿ-5(ಎ)** ಎಂದು ಗುರುತಿಸಲಾಯಿತು.

3. ದಿ.03.07.2015 ರಂದು ನ್ಯಾಯಾಲಯದ ಆದೇಶದ ಮೇರೆಗೆ KA–40–T–1200 compressor tractor ಅನ್ನು ಪಂಚರಾದ ಚಾಸಾ –8 ಮತುತ 9 ರವರ ಸಮಕ್ಷಮ ಮಾಲೀಕರಾದ ಆರೋಪಿ ಎಸ್ ಡಿ ರಾಜು ರವರ ಮಧ್ಯಂತರ ಸ್ವಾಧೀನಕ್ಕೆ ಬಿಡುಗಡೆಗೊಳಿಸಿರುತ್ತೇನೆ. ಈ ಬಗ್ಗೆ ಒಂದು ಪಂಚನಾಮೆಯನ್ನು ಜರುಗಿಸಿರುತ್ತೇನೆ. ಸಾಕ್ಷಿ ಸದರಿ ಪಂಚನಾಮೆಯನ್ನು ನೋಡಿ ಗುರುತಿಸಿದ ಮೇರೆಗೆ ಅದನ್ನು **ನಿಪಿ–6** ಎಂದು ಸಾಕ್ಷಿಯು ಸಹಿಯನ್ನು **ನಿಪಿ–6(ಎ)** ಎಂದು, ಆರೋಪಿಯ ಸಹಿಯನ್ನು **ನಿಪಿ–6(ಬಿ)** ಎಂದು ಗುರುತಿಸಲಾಯಿತು. ಸಾಕ್ಷಿ ನಿಪಿ–3 ರಲ್ಲಿರುವ compressor tractor ಅನ್ನು ನೋಡಿ ಗುರುತಿಸಿರುತ್ತಾರೆ.

4. ಈ ಪ್ರಕರಣದಲ್ಲಿ ಯಾವುದೇ ಪರವಾನಿಗೆ ಇಲ್ಲದೆ ಸ್ಫೋಟಕ ವಸ್ತುಗಳನ್ನು ಸಂಗ್ಟಹಿಸಿಗಣಿಗಾರಿಕೆ ಮಾಡಿರುವ ಸಾಕ್ಷ್ಯಾಧಾರಗಳು ಕಂಡು ಬಂದಿದ್ದು, ಆರೋಪಿಯ ವಿರುದ್ಧ ತನಿಖೆಯನ್ನು ಪೂರ್ಣಗಳಿಸಿ ದಿ.10.07.2015 ರಂದು ಮಾನ್ಯ ನ್ಯಾಯಾಲಯಕ್ಕೆ ದೋಷರೋಪಣ ಪತ್ರವನ್ನು ಸಲ್ಲಿಸಿಕೊಂಡಿರುತ್ತೇನೆ. ಸಾಕ್ಷಿ ನ್ಯಾಯಾಲಯದ ಮುಂದಿರುವ ಆರೋಪಿಯನ್ನು ವಿಸಿ ಮೂಲಕ ನೋಡಿ ಗುರುತಿಸಿರುತ್ತಾರೆ.

ಈ ಹಂತದಲ್ಲಿ ಮುದ್ದೆ ಮಾಲುಗಳ ಬಗ್ಗೆ ಮುಂದುವರೆದ ಸಾಕ್ಷ್ಯ ನೀಡಿಲು ಸಾಕ್ಷಿಯು ಸಮಯಾವಕಾಶ ಕೋರಿದ್ದು, ನೀಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಸಾಕ್ಷಿಯ ಹೇಳಿಕೆಯನ್ನು ಗಣಕ ಯಂತ್ರದ ಮೂಲಕ ಬೆರಳಚ್ಚು ಮಾಡಿಸಲಾಗಿದೆ.)

ಓ.ಹೇ.ಕೇ.ಸ.ಇ.

Sd/-
**(ಟಿ. ಪಿ. ರಾಮಲಿಂಗೇ ಗೌಡ)**
ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,

ಚಿಕ್ಕಬಳ್ಳಾಪುರ.